# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1288 |
| ಸದಸ್ಯರ ಹೆಸರು | : | ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 24-12-2021. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿ ಸದಸ್ಯರು ಪಂಚಾಯತಿಗೆ ಮೀಸಲಿಟ್ಟಂತಹ ಅನುದಾನದಲ್ಲಿ ಕನಿಷ್ಠ ಅನುದಾನ ನೀಡುವ ಅಧಿಕಾರವನ್ನು ಸದಸ್ಯರಿಗೆ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; (ಸಂಪೂರ್ಣ ವಿವರ ನೀಡುವುದು) | ಇಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| (ಆ) | ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಗುರುತಿನ ಚೀಟಿ, ಪಿಂಚಣಿ ವ್ಯವಸ್ಥೆ ಮತ್ತು ಗ್ರಾಮ ಪಂಚಾಯತಿಯ ಅಭಿವೃದ್ಧಿಗಾಗಿ ಅಧ್ಯಯನ ಪ್ರವಾಸ ಕಲ್ಪಿಸಲು ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆಯೇ; | 3 ಹಂತದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಚುನಾಯಿತ ಪ್ರತಿನಿಧಿಗಳಿಗೆ ಪಿಂಚಣಿ ನೀಡುವ ಕುರಿತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ ಅವಕಾಶವಿರುವುದಿಲ್ಲ.<br><br>ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಗುರುತಿನ ಚೀಟಿ ಹಾಗೂ ಗ್ರಾಮ ಪಂಚಾಯತಿಯ ಅಭಿವೃದ್ಧಿಗಾಗಿ ಅಧ್ಯಯನ ಪ್ರವಾಸ ಕಲ್ಪಿಸುವ ಕುರಿತು ಸರ್ಕಾರದ ಮಟ್ಟದಲ್ಲಿ ಯಾವುದೇ ಪ್ರಸ್ತಾವನೆಯಿರುವುದಿಲ್ಲ. |
| (ಇ) | ನಡೆದಿದ್ದಲ್ಲಿ, ಸದಸ್ಯರಿಗೆ ಮೇಲ್ಕಂಡ ಸೌಲಭ್ಯಗಳನ್ನು ಎಂದಿನಿಂದ ಜಾರಿಗೆ ತರಲು ಸರ್ಕಾರ ಮುಂದಾಗುವುದು? (ವಿವರ ನೀಡುವುದು) | ಉದ್ಭವಿಸುವುದಿಲ್ಲ. |

ಸಂಖ್ಯೆ: ಗ್ರಾಅಪ 465 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.